**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | | 1172 |
| ಮಾನ್ಯ ಸದಸ್ಯರ ಹೆಸರು | | ಶ್ರೀ ಎನ್.ಎಸ್.ಭೋಸರಾಜು |
| ಉತ್ತರಿಸುವ ಸಚಿವರು | | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | | 20–12–2018 |
| ಪ್ರಶ್ನೆ | | ಉತ್ತರ |
| (ಅ) | ರಾಯಚೂರು ಜಿಲ್ಲೆಯಲ್ಲಿ ನೂತನ ವಿಶ್ವವಿದ್ಯಾಲಯ ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಎಂದಿನಿಂದ ಕಾರ್ಯಾರಂಭಕ್ಕೆ ಬರುತ್ತಿದೆ; | ರಾಯಚೂರು ವಿಶ್ವವಿದ್ಯಾಲಯವನ್ನು ಪ್ರಾರಂಭಿಸುವ ಪ್ರಸ್ತಾವನೆಯನ್ನು ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ವಿಧೇಯಕ 2017ರಲ್ಲಿ ಸೇರ್ಪಡೆಗೊಳಿಸಲಾಗಿದೆ. ಸದರಿ ವಿಧೇಯಕಕ್ಕೆ ಉಭಯ ಸದನಗಳು ಅನುಮೋದನೆ ನೀಡಿದ್ದು, ಪ್ರಸ್ತುತ ಗೌರವಾನ್ವಿತ ರಾಜ್ಯಪಾಲರ ಅನುಮೋದನೆಗೆ ಸಲ್ಲಿಸಲಾಗಿದೆ. ಗೌರವಾನ್ವಿತ ರಾಜ್ಯಪಾಲರಿಂದ ಸದರಿ ವಿಧೇಯಕವು ಅನುಮೋದನೆಗೊಂಡು ರಾಜ್ಯಪತ್ರದಲ್ಲಿ ಪ್ರಕಟಗೊಂಡ ನಂತರ ರಾಯಚೂರು ವಿಶ್ವವಿದ್ಯಾಲಯದಲ್ಲಿ ಶೈಕ್ಷಣಿಕ ಚಟುವಟಿಕೆಗಳನ್ನು ಕಾರ್ಯಾರಂಭ ಮಾಡಲಾಗುತ್ತದೆ. |
| (ಆ) | ರಾಯಚೂರಿನಲ್ಲಿರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನ ನೂತನ ಕಟ್ಟಡದ ಕಾಮಗಾರಿಗೆ ಬೇಕಾಗಿರುವ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ರಾಯಚೂರು ಸಂಸ್ಥೆಯ ಮುಖ್ಯ ಕಟ್ಟಡವನ್ನು ಅಂದಾಜು ಮೊತ್ತ ರೂ.2531.00 ಲಕ್ಷಗಳ ಅನುಮೋದನೆ ನೀಡಿದ್ದು, 2017–18 ನೇ ಸಾಲಿನವರೆಗೆ ಸದರಿ ಕಾಮಗಾರಿಗೆ ರೂ.2531.00 ಲಕ್ಷಗಳನ್ನು ಮೆ.ರೈಟ್ಸ್ ಸಂಸ್ಥೆಗೆ ಬಿಡುಗಡೆ ಮಾಡಲಾಗಿದೆ. ಪ್ರಸ್ತುತ ಸಿವಿಲ್ ಕಾಮಗಾರಿಯು ಮುಕ್ತಾಯಗೊಂಡಿರುತ್ತದೆ.<br><br>ಸದರಿ ಕಟ್ಟಡದ ಆಂತರಿಕ ಮತ್ತು ಬಾಹ್ಯ ವಿದ್ಯುತ್ ಕಾಮಗಾರಿಯನ್ನು ಪ್ರಾರಂಭಿಸಲು ಮೆ.ರೈಟ್ಸ್ ಸಂಸ್ಥೆಗೆ ಸೂಚಿಸಲಾಗಿದ್ದು, ಪ್ರಸ್ತುತ GESCOM ವತಿಯಿಂದ ವಿದ್ಯುತ್ ಮಂಜೂರಾಗಿದ್ದು ಕಾಮಗಾರಿಯು ಪ್ರಗತಿಯಲ್ಲಿರುತ್ತದೆ. ಫೆಬ್ರವರಿ–2019 ರೊಳಗೆ ಕಾಮಗಾರಿಯನ್ನು ಮುಕ್ತಾಯಗೊಳಿಸಲಾಗುವುದು ಹಾಗೂ ಆಂತರಿಕ ಮತ್ತು ಬಾಹ್ಯ ವಿದ್ಯುತ್ ಕಾಮಗಾರಿಯನ್ನು ಶೀಘ್ರವಾಗಿ ಪೂರ್ಣಗೊಳಿಸಿ ಹಸ್ತಾಂತರ ಮಾಡುವಂತೆ ಮೆ.ರೈಟ್ಸ್ ಸಂಸ್ಥೆಗೆ ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದ ಪತ್ರ ಸಂಖ್ಯೆ: ಡಿಟಿಇ 09 ಬಿಎಲ್‌ಡಿ 2007 ದಿನಾಂಕ:11–12–2018 ರಲ್ಲಿ ತಿಳಿಸಲಾಗಿದೆ. |
| (ಇ) | ರಾಯಚೂರಿನಲ್ಲಿರುವ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜುನಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು: | ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ರಾಯಚೂರು ಜಿಲ್ಲೆಯಲ್ಲಿ 01 ಸರ್ಕಾರಿ ಪಾಲಿಟೆಕ್ನಿಕ್, ರಾಯಚೂರು ಸಂಸ್ಥೆಯು ಕಾರ್ಯನಿರ್ವಹಿಸುತ್ತಿದ್ದು, ಸದರಿ ಸಂಸ್ಥೆಯಲ್ಲಿ ಬೋಧಕ ವೃಂದದಲ್ಲಿ 46 ಹುದ್ದೆಗಳು ಮಂಜೂರಾಗಿದ್ದು, 26 ಹುದ್ದೆಗಳು ಭರ್ತಿಯಾಗಿದ್ದು, 20 ಹುದ್ದೆಗಳು ಖಾಲಿ ಇರುತ್ತವೆ. ಖಾಲಿಯಿರುವ ಪೂರ್ಣಕಾಲಿಕ ಉಪನ್ಯಾಸಕರ ಹುದ್ದೆಗಳೆದುರಾಗಿ 18 ಅರೆಕಾಲಿಕ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಂಡು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಗೆ ತೊಂದರೆಯಾಗದಂತೆ ಪಾಠ ಪ್ರವಚನಗಳನ್ನು ನಡೆಸಲಾಗುತ್ತಿದೆ.<br><br>ಸರ್ಕಾರಿ ಪಾಲಿಟೆಕ್ನಿಕ್, ರಾಯಚೂರು ಸಂಸ್ಥೆಯಲ್ಲಿ 20 ಹುದ್ದೆಗಳು ಖಾಲಿ ಇದ್ದು, ಈ ಹುದ್ದೆಗಳನ್ನು ಒಳಗೊಂಡಂತೆ ಕರ್ನಾಟಕ ರಾಜ್ಯದಲ್ಲಿನ ಎಲ್ಲಾ ಜಿಲ್ಲೆಗಳಲ್ಲಿ ಒಟ್ಟಾರೆ 501 ಉಪನ್ಯಾಸಕರ ಹುದ್ದೆಗಳನ್ನು ಭರ್ತಿಮಾಡಲು ಕ್ರಮ ಕೈಗೊಳ್ಳಲಾಗಿದ್ದು, ವಿವರವಾದ ಮಾಹಿತಿಯನ್ನು **ಅನುಬಂಧ–1** ರಲ್ಲಿ ಒದಗಿಸಿದೆ. |

| | | |
|---|---|---|
| (ಈ) | ಈ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ಕಟ್ಟಡ ಶಿಥಿಲಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು? | ಸರ್ಕಾರಿ ಪಾಲಿಟೆಕ್ನಿಕ್, ರಾಯಚೂರು ಸಂಸ್ಥೆಯ ಮುಖ್ಯ ಕಟ್ಟಡವು ಸುಸ್ಥಿತಿಯಲ್ಲಿರುತ್ತದೆ. ಸದರಿ ಸಂಸ್ಥೆಯ ಹಳೆಯ ಬಾಲಕರ ಹಾಸ್ಟೆಲ್ ಕಟ್ಟಡವು ಶಿಥಿಲಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆ.<br><br>ಸರ್ಕಾರಿ ಪಾಲಿಟೆಕ್ನಿಕ್, ರಾಯಚೂರು, ಹಳೆಯ ಬಾಲಕರ ಹಾಸ್ಟೆಲ್ ಕಟ್ಟಡವು ವಿದ್ಯಾರ್ಥಿಗಳು ವಾಸಿಸಲು ಯೋಗ್ಯವಿಲ್ಲವೆಂದು ಲೋಕೋಪಯೋಗಿ ಇಲಾಖೆಯವರು ಪರಿಶೀಲಿಸಿ ಪ್ರಮಾಣ ಪತ್ರವನ್ನು ನೀಡಿದ್ದು, ಸದರಿ ಹಾಸ್ಟೆಲ್ ಕಟ್ಟಡವನ್ನು ತೆರವುಗೊಳಿಸಿ ನೂತನ ಕಟ್ಟಡವನ್ನು ನಿರ್ಮಾಣ ಮಾಡಲು ಕ್ರಮ ವಹಿಸಲಾಗುವುದು.<br><br>ಇದಲ್ಲದೆ, ಸದರಿ ಸಂಸ್ಥೆಗೆ ಎಸ್.ಸಿ.ಪಿ/ಟಿ.ಎಸ್.ಪಿ ಯೋಜನೆಯಡಿ ವಿದ್ಯಾರ್ಥಿನಿಯರ ವಿದ್ಯಾರ್ಥಿನಿಲಯ ಹಾಗೂ ಕೇಂದ್ರ ಸರ್ಕಾರದ ಎಂ.ಹೆಚ್.ಆರ್.ಡಿ ವತಿಯಿಂದ ವಿದ್ಯಾರ್ಥಿನಿಯರ ವಿದ್ಯಾರ್ಥಿನಿಲಯ ಮಂಜೂರಾಗಿದ್ದು, ಸದರಿ ಕಾಮಗಾರಿಗಳು ಮುಕ್ತಾಯದ ಹಂತದಲ್ಲಿದೆ. |

ಸಂಖ್ಯೆ: ಇಡಿ 441 ಯುಎನ್ಇ 2018

(ಜಿ.ಟಿ. ದೇವೇಗೌಡ)

ಉನ್ನತ ಶಿಕ್ಷಣ ಸಚಿವರು.